I/302926/2022

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:42(24)3-1:ಆರ್‌ಆರ್‌ಸಿ:21
(ಇ- 531048)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ, ಬೆಂಗಳೂರು,
ದಿನಾಂಕ: 23.08.2022

**ತಿದ್ದುಪಡಿ ಆದೇಶ**

**ವಿಷಯ:** 2021-22ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ರಾಯಚೂರು ಜಿಲ್ಲೆ ದೇವದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಂಜೂರಾತಿ ನೀಡಿದ ರಸ್ತೆ ಕಾಮಗಾರಿಗಳ ಅನುಷ್ಠಾನ ಸಂಸ್ಥೆಯನ್ನು ಬದಲಾವಣೆ ಮಾಡುವ ಕುರಿತು.

**ಓದಲಾದ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 42(24)-3:ಆರ್‌ಆರ್‌ಸಿ:21 (ಇ-531048) ದಿನಾಂಕ: 29.10.2021
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಯಚೂರು ಜಿಲ್ಲಾ ಪಂಚಾಯಿತಿ ರವರ ಪತ್ರದ ಸಂ: ಜಿಪಂರಾ/ರ&ಸೇ/e11644-2/2021-22/1191, ದಿನಾಂಕ: 05.07.2022.

********

ಓದಲಾದ-1 ರ ಸರ್ಕಾರದ ಆದೇಶದಲ್ಲಿ, 2021-22ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದ ಲೆ.ಶೀ.5054 ಯೋಜನೆಯಡಿ ರಾಯಚೂರು ಜಿಲ್ಲೆ ದೇವದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರೂ.10.00 ಕೋಟಿಗಳ ಮೊತ್ತದಲ್ಲಿ 10 ರಸ್ತೆ ಕಾಮಗಾರಿಗಳನ್ನು ಕೆಆರ್‌ಐಡಿಎಲ್ ಸಂಸ್ಥೆ ಮೂಲಕ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

ಸದರಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದ ಒಟ್ಟು ರೂ.10.00 ಕೋಟಿ ಮೊತ್ತದ 10 ರಸ್ತೆ ಕಾಮಗಾರಿಗಳನ್ನು ಕೆಆರ್‌ಐಡಿಎಲ್ ಸಂಸ್ಥೆ ಬದಲಾಗಿ ಪಿ.ಆರ್.ಇ.ಡಿ ಇಲಾಖೆ ಮೂಲಕ ಅನುಷ್ಠಾನಗೊಳಿಸಲು ಅನುಮೋದನೆ ನೀಡುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ರಾಯಚೂರು ರವರು ಓದಲಾದ-2 ರಲ್ಲಿ ಕೋರಿರುತ್ತಾರೆ.

ಆದುದರಿಂದ, ರಾಯಚೂರು ಜಿಲ್ಲೆ ದೇವದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರೂ.10.00 ಕೋಟಿ ಮೊತ್ತದಲ್ಲಿ 10 ರಸ್ತೆ ಕಾಮಗಾರಿಗಳನ್ನು **ಕೆಆರ್‌ಐಡಿಎಲ್ ಸಂಸ್ಥೆ ಬದಲಾಗಿ ಪಿ.ಆರ್.ಇ.ಡಿ ಇಲಾಖೆ** ಮೂಲಕ ಅನುಷ್ಠಾನ ಮಾಡಲು ಸರ್ಕಾರವು ಅನುಮೋದಿಸಿದ್ದು, ಉಳಿದಂತೆ ಈ ಹಿಂದಿನ ಆದೇಶದಲ್ಲಿ ಯಾವುದೇ ಬದಲಾವಣೆಯಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**Signed by Ravikumar**
**Date: 23-08-2022 15:49:30**

23/08/2022

(ಎನ್. ರವಿಕುಮಾರ್)
ಉಪ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ
ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕ ಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ , ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU) (IF), 5ನೇ ಹಂತ, ಬಹುಮಹಡಿಗಳ ಕಟ್ಟಡ ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ,

I/302926/2022

ಬೆಂಗಳೂರು.

10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು,ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ , ಟ್ರೆಜರಿ ಡಿಪಾರ್ಟ್ ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ , ವಿಧಾನಸೌಧ, ಬೆಂಗಳೂರು.
14. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು
15. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಬೆಂಗಳೂರು
16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಯಚೂರು ಜಿಲ್ಲಾ ಪಂಚಾಯತಿ.
17. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು
18. ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ.
19. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.